**ಪ್ರಧಾನ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 6701/2024**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ 2**

**ದಿನಾಂಕಃ** 01.07.2026 **ಸಿಡಬ್ಲ್ಯೂ 2**

| | |
|---|---|
| ಹೆಸರು | ಹೆಚ್ . ಮಹೇಶ್ವರಪ್ಪ |
| ತಂದೆಯ ಹೆಸರು | ಹಾಲಪ್ಪ |
| ವಯಸ್ಸು | 65 ವರ್ಷ |
| ಉದ್ಯೋಗ | ವ್ಯವಸಾಯ |
| ವಾಸ ಸ್ಥಳ | ಗುತ್ತೂರು |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಚಾಸಾ1 ಮತ್ತು 3 ರವರ ಪರಿಚಯವಿರುತ್ತದೆ. ನನಗೆ ಪ್ರಕರಣದ ಬಗ್ಗೆ ಮಾಹಿತಿ ಇರುವುದಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಜಪ್ತಿ ಪಡಿಸಿಕೊಂಡಿರುವುದಿಲ್ಲ. ನಾನು ಆರೋಪಿತರನ್ನು ನೋಡಿರುವುದಿಲ್ಲ. ಸಾಕ್ಷಿಯು ಪಂಚನಾಮೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಅದನ್ನು ನಿಪಿ.2 ಬಿ ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ.3 ಮತ್ತು 4 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಅವುಗಳನ್ನು ನಿಪಿ.3 ಬಿ, 4 ಬಿ ಎಂದು ಗುರುತಿಸಲಾಯಿತು. ಸಾಕ್ಷಿಯು ಮು.ಮಾ.ಗಳ ಮೇಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಎಪಿಪಿ ಯವರು ಕೋರಿದ್ದು, ಸಂಗತಿಗಳನ್ನು ಪರಿಶೀಲಿಸಲಾಗಿ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲುಃ ಸಸಅ ರವರಿಂದಃ**

ದಿಃ18.03.2024 ರಂದು ನಾನು ಹಳೇ ಹರ್ಲಾಪುರ ಗ್ರಾಮದ ಹೊಳೆ ರಸ್ತೆಯ ಕ್ರಾಸ್ ನಲ್ಲಿ ನಿಂತುಕೊಂಡಿದ್ದಾಗ ಅಬಕಾರಿ ಸಿಬ್ಬಂದಿಗಳು ತಮ್ಮ ಇಲಾಖಾ ವಾಹನದಲ್ಲಿ ಬಂದು ನಮ್ಮನ್ನು ಕರೆಸಿ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿದ್ದು ಅಕ್ರಮಗಳನು ಪತ್ತೆ ಮಾಡಲು ಹೋಗುತ್ತಿದ್ದು ತಾವು ಪಂಚನಾಮೆಗೆ ಸಹಕರಿಸಬೇಕೆಂದು ಕೇಳಿಕೆಕೊಂಡಾಗ ನಾವು ಒಪ್ಪಿಕೊಂಡಿರುತ್ತೇವೆ ಎಂದರೆ ಸರಿಯಲ್ಲ. ಆಗ ಅಬಕಾರಿ ಅಧಿಕಾರಿಗಳು ತಪಾಸಣೆ ಮಾಡುತ್ತಿದ್ದಾಗ ಹರಿಹರ ನಗರದ ಕಡೆಯಿಂದ ಒಬ್ಬ ವ್ಯಕ್ತಿ ಟಿವಿಎಸ್ ಎಕ್ಸೆಲ್ ದ್ವಿಚಕ್ರ ವಾಹನದಲ್ಲಿ ರಟ್ಟಿನ ಬಾಕ್ಸ್ ಇಟ್ಟುಕೊಂಡು ಬರುತ್ತಿರುವಾಗ ಅಧಿಕಾರಿಗಳು ಆತನನ್ನು ನಿಲ್ಲಿಸಲು ಸೂಚಿಸಿದಾಗ ಅವನು ಅಧಿಕಾರಿಗಳನ್ನು ನೋಡಿ ದ್ವಿಚಕ್ರ ವಾಹನವನ್ನು ಮತ್ತು ರಟ್ಟಿನ ಬಾಕ್ಸಗಳನ್ನು ಅಲ್ಲಿಯೇ ಬಿಟ್ಟು ಓಡಿ ಹೋಗಿ ತಲೆಮರೆಸಿಕೊಂಡನು ಎಂದರೆ ಸರಿಯಲ್ಲ. ನಂತರ ಅಬಕಾರಿ ಅಧಿಕಾರಿಗಳು ವಾಹನ ಪರಿಶೀಲಿಸಿ ಶೋಧನಾ ಸಮುಚಿತ ್ತಧಾರವನ್ನು ತಯಾರಿಸಿ ಪರಿಶೀಲಿಸಿದಾಗ 5 ರಟಟ್ಟಿನ ಪೆಟ್ಟಿಗೆಗಳಲ್ಲಿ ಒರಿಜಪಿನಲ್ ಚಾಯ್ಸು ವಿಸ್ಕಿಯ 90 ಎಂಎಲ್ ನ 480 ಮದ್ಯದ ಟೆಟ್ರಾ ಪ್ಯಾಕೆಟಗಳು 3 ರಟ್ಟಿನ ಪೆಟ್ಟಿಗೆಗಳಲ್ಲಿ ಹೈವಾಟ್ಸ ಚಿಯರ್ಸ ವಿಸ್ಕಿಯ 90 ಎಂಎಲ್ ನ

288 ಮದ್ಯದ ಟೆಟ್ರಾ ಪ್ಯಾಕೆಟಗಳು ಮದ್ಯದ ಇದ್ದವು ಸದರಿ ವಾಹನವನ್ನು ಪರಿಶೀಲಿಸಿದಾಗ ಅದು ಟಿವಿಎಸ್ ಎಕ್ಸೆಲ್ 100 ಹಸಿರು ಬಣ್ಣದ ದ್ವಿಚಕ್ರವಾಹನ ನೊಂದಣಿ ಸಂ.ಕೆಎ-17 ಇಯು 5911 ಅಂತ ಇದ್ದು ಓಡಿ ಹೋದ ವ್ಯಕ್ತಿಯ ಬಗ್ಗೆ ವಿಚಾರಿಸಿದಾಗ ಆತನ ಹೆಸರು ರಾಮಪ್ಪ ಕರೆ ಹನುಮಂತಪ್ಪ ಎಂದು ಗೊತ್ತಾಗಿರುತ್ತದೆ ಎಂದರೆ ಸರಿಯಲ್ಲ. ನಂತರ ಅವುಗಳಿಂದ ತಲಾ 10 ರಂತೆ ರಾಸಾಯನಿಕ ಪರೀಕ್ಷೆಗಾಗಿ ತೆಗೆದು ಪಂಚನಾಮೆಯನ್ನು ಸಂಜೆ 6.20 ರಿಂದ 7.30 ರವರೆಗೆ ಮಾಡಿ ಮು.ಮಾಗಳನ್ನು ಜಪ್ತು ಪಡಿಸಿಕೊಂಡು ನಮ್ಮ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ನಮ್ಮ ಸಮಕ್ಷಮ ಪಂಚನಾಮೆ ಮಾಡಿ ಮು.ಮಾಗಳನ್ನು ಜಪ್ತು ಪಡಿಸಿಕೊಂಡಿದ್ದರೂ ಸಹ ಆರೋಪಿತನು ನಮ್ಮ ಊರಿನವನೇ ಆಗಿದ್ದರಿಂದ ಅವನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಆರೋಪಿತರ ಪರ ವಕೀಲರಿಂದಃ ಇರುವುದಿಲ್ಲ.

**ಮರುವಿಚಾರಣೆ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

Sd/-

ಪ್ರಧಾನ ಸಿವಿಲ್ ನ್ಯಾಯಾಧೀಶರು

ಮತ್ತು ಜೆಎಂಎಫ್‌ಸಿ, ಹರಿಹರ.